# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಮಧ್ಯಾಹ್ನ ಉಪಹಾರ ಯೋಜನೆಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಯವರ ಸಂಭಾವನೆಯನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ:- ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಕಡತ ಸಂಖ್ಯೆ ; ಎಂ:3/ಮ.ಉ.ಯೋ/ಅಡುಗೆ ಸಿಬ್ಬಂದಿಗಳ ಬೇಡಿಕೆ/41/15-16.

***

ಪ್ರಸ್ತಾವನೆ:-

ಮೇಲೆ ಓದಲಾದ ಕಡತದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರು ಮಧ್ಯಾಹ್ನ ಉಪಹಾರ ಯೋಜನೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರಿಗೆ ಪಸ್ತುತ ನೀಡುತ್ತಿರುವ ಸಂಭಾವನೆಗೆ ಹೆಚ್ಚುವರಿಯಾಗಿ ರೂ.300/-ಗಳನ್ನು ಹೆಚ್ಚಿಸಿದಲ್ಲಿ, ವಾರ್ಷಿಕವಾಗಿ ಸರ್ಕಾರಕ್ಕೆ ರೂ.3600.00ಲಕ್ಷಗಳು ಹೆಚ್ಚುವರಿ ಅನುದಾನದ ಅಗತ್ಯತೆಯಿರುವುದಾಗಿ ತಿಳಿಸುತ್ತಾ, ಈ ಬಗ್ಗೆ ಸೂಕ್ತ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ : 05 ಎಂಎಂಎಸ್ 2016**
**ಬೆಂಗಳೂರು ದಿನಾಂಕ : 21-05-2016**

ಮೇಲಿನ ಪ್ರಸ್ತಾವನೆಯಲ್ಲಿ ಕೋರಿರುವ ಅಂಶಗಳ ಹಿನ್ನಲೆಯಲ್ಲಿ ದಿನಾಂಕ: 01.04.2016 ರಿಂದ ಜಾರಿಗೆ ಬರುವಂತೆ ಅಕ್ಷರ ದಾಸೋಹ ಯೋಜನೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆಯವರಿಗೆ ಮಾಸಿಕ ಸಂಭಾವನೆಯನ್ನು ತಲಾ 300/-ರೂ.ಗಳಷ್ಟು ಹೆಚ್ಚಿಸಿ. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಅನುಮತಿ ನೀಡಿದೆ.

ರೂ.300/-ಗಳನ್ನು ಹೆಚ್ಚಿಸಿದಲ್ಲಿ ಮುಖ್ಯ ಅಡುಗೆಯವರಿಗೆ ಮಾಹೆಯಾನ ರೂ.2000/- ಸಹಾಯಕ ಅಡುಗೆಯವರಿಗೆ ಮಾಹೆಯಾನ ರೂ.1900/-ಗಳ ಗೌರವ ಸಂಭಾವನೆ ದೊರೆಯಲಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 215 ವೆಚ್ಚ-8/2016, ದಿ: 28-04-2016ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಅಪರ್ಣಾ ಪಾವಟೆ)
ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಉಪ ಕಾರ್ಯದರ್ಶಿ
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
(ಯೋಜನೆ)

ಇವರಿಗೆ,

1. ಮಹಾಲೇಖಪಾಲಕರು, ಕರ್ನಾಟಕ (ಆಡಿಟ್ 1 & 2) ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು,
3. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.